ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1858(2129)
ಸದಸ್ಯರ ಹೆಸರು	:	ಶ್ರೀ ಎಸ್. ರವಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	18-03-2022
ಉತ್ತರಿಸುವವರು	:	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ.	ಪ್ರಶ್ನೆಗಳು	ಉತ್ತರ
(ಅ)	ರಾಜ್ಯದಲ್ಲಿರುವ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಗಳ ಸದಸ್ಯರು, ಉಪಾಧ್ಯಕ್ಷರು, ಅಧ್ಯಕ್ಷರಿಗೆ ನೀಡುತ್ತಿರುವ ಗೌರವಧನವೆಷ್ಟು; ಈ ಗೌರವಧನವನ್ನು ಯಾವಾಗ ಪರಿಷ್ಕರಿಸಲಾಗಿದೆ; (ವಿವರ ನೀಡುವುದು)	2017-18 ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿರುವಂತೆ ದಿನಾಂಕ: 01.04.2017ರಿಂದ ಅನ್ವಯಿಸುವಂತೆ, ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 116 ಜಿಪಸ 2019, ದಿನಾಂಕ: 03.05.2017ರನ್ವಯ ರಾಜ್ಯದ ಪಂಚಾಯತ್‌ರಾಜ್ ಸಂಸ್ಥೆಗಳ ಚುನಾಯಿತ ಪ್ರತಿನಿಧಿಗಳಿಗೆ ಮಾಹೆಯಾನ ಗೌರವಧನವನ್ನು ಈ ಕೆಳಕಂಡ ಕೋಷ್ಟಕದನ್ವಯ ಪರಿಷ್ಕರಿಸಲಾಗಿದೆ. (ರೂ.ಗಳಲ್ಲಿ)

ಪದನಾಮ	ಗ್ರಾಮ ಪಂಚಾಯತಿ	ತಾಲ್ಲೂಕು ಪಂಚಾಯತಿ	ಜಿಲ್ಲಾ ಪಂಚಾಯತಿ
ಅಧ್ಯಕ್ಷರು	3000	6000	35000
ಉಪಾಧ್ಯಕ್ಷರು	2000	4000	15000
ಸದಸ್ಯರು	1000	3000	5000

ಕ್ರ.ಸಂ.	ಪ್ರಶ್ನೆಗಳು	ಉತ್ತರ
(ಆ)	ಈ ಸ್ಥಳೀಯ ಸಂಸ್ಥೆಗಳಿಗೆ ಆಯ್ಕೆಯಾಗುವ ಬಹುತೇಕ ಸದಸ್ಯರು ಆರ್ಥಿಕವಾಗಿ ಹಿಂದುಳಿದವರಾಗಿದ್ದು, ಸದಸ್ಯರು ತಮ್ಮ ವೈಯಕ್ತಿಕ ಕೆಲಸಗಳನ್ನು ಬದಿಗೊತ್ತಿ ಕಚೇರಿಗೆ ಹಾಜರಾಗಬೇಕಾದ ಅನಿವಾರ್ಯತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
	ಬಂದಿದ್ದಲ್ಲಿ, ಇವರಿಗೆ ಗೌರವಧನ ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?(ವಿವರ ನೀಡುವುದು)	ರಾಜ್ಯದಲ್ಲಿರುವ ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳ ಗೌರವಧನ ಪರಿಷ್ಕರಣೆಯ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

ಸಂಖ್ಯೆ: ಗ್ರಾಅಪಂರಾ 132 ಜಿಪಸ 2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು